# MARCH 12,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ, ರಂಗನತಿಟ್ಟು ಪಕ್ಷಿಧಾಮದಲ್ಲಿ 30 ಲಕ್ಷ ರೂಪಾಯಿ ಅಂದಾಜು ವೆಚ್ಚದಲ್ಲಿ 'ಚಿಟ್ಟೆ ಪಾರ್ಕ್' ಅನ್ನು ನಿರ್ಮಿಸಲು ಉದ್ದೇಶಿಸಲಾಗಿದೆ ಎಂದು ಅರಣ್ಯ, ಜೀವಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ.ಖಂಡ್ರೆ ತಿಳಿಸಿದ್ದಾರೆ. ವಿಧಾನ ಪರಿಷತ್ತಿನಲ್ಲಿ ಶಾಸಕ ಮಧು ಜಿ.ಮಾದೇಗೌಡ ಅವರ ಪ್ರಶ್ನೆಗೆ ಲಿಖಿತ ಉತ್ತರ ನೀಡಿರುವ ಸಚಿವರು, ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನದಲ್ಲಿ ನಿರ್ಮಿಸಿರುವ 'ಚಿಟ್ಟೆ ಪಾರ್ಕ್' ಮಾದರಿಯಲ್ಲಿ ರಂಗನತಿಟ್ಟಿನಲ್ಲಿ ನೂತನ ಪಾರ್ಕ್ ನಿರ್ಮಾಣ ಮಾಡಲಾಗುವುದು. 2025–26ನೇ ಸಾಲಿನ ಕ್ರಿಯಾಯೋಜನೆಯಲ್ಲಿ ಅಳವಡಿಸಿಕೊಂಡು ಅನುಷ್ಠಾನಕ್ಕೆ ತರಲಾಗುವುದು ಎಂದು ತಿಳಿಸಿದ್ದಾರೆ.

<><><>

ರಾಜ್ಯದಲ್ಲಿ ಚಾಲ್ತಿಯಲ್ಲಿರುವ ಪಂಚ ಗ್ಯಾರಂಟಿ ಯೋಜನೆಗಳನ್ನು ಯಾವುದೇ ಕಾರಣಕ್ಕೂ ನಿಲ್ಲಿಸುವುದಿಲ್ಲ. ವಾರ್ಷಿಕವಾಗಿ ಪಂಚ ಖಾತರಿ ಯೋಜನೆಗಳಿಗೆ 52 ಸಾವಿರ ಕೋಟಿ ರೂಪಾಯಿ ವಿನಿಯೋಗಿಸಲಾಗುತ್ತಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಹೇಳಿದರು. ವಿಧಾನಸಭೆಯ ಕಲಾಪದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

<><><>

ಸದನದಲ್ಲಿ, ಗ್ಯಾರಂಟಿ ಯೋಜನೆಗಳಿಗೆ ತಮ್ಮ ವಿರೋಧವಿಲ್ಲ ಎಂದಿರುವ ಪ್ರತಿಪಕ್ಷ ನಾಯಕರು. ಪಂಚ ಗ್ಯಾರಂಟಿ ಯೋಜನೆಗಳ ಅನು ಠಾನ ಸಮಿತಿಗಳನ್ನು ರದ್ದುಪಡಿಸುವಂತೆ ಬೇಡಿಕೆ ಇರಿಸಿದರು. ಇಂದು, ಪಂಚ ಗ್ಯಾರಂಟಿ ಯೋಜನೆಗಳ ಅನು ಠಾನ ಸಮಿತಿಗಳ ರದ್ದತಿಗೆ ಆಗ್ರಹಿಸಿ ಪ್ರತಿಪಕ್ಷ ಬಿಜೆಪಿ ಹಾಗೂ ಜೆಡಿಎಸ್ ಶಾಸಕರು ವಿಧಾನಸೌಧದ ಎದುರು ಪ್ರತಿಭಟನೆ ನಡೆಸಿದರು.

<><><>

2020 ನೇ ಸಾಲಿನ, ರಾಜ್ಯ ವಾರ್ಷಿಕ ಚಲನಚಿತ್ರ ಪ್ರಶಸ್ತಿಗಳು ಪ್ರಕಟವಾಗಿವೆ. 'ಪಿಂಕಿ ಎಲ್ಲಿ' ಸಿನಿಮಾ, ಅತ್ಯುತ್ತಮ ಚಲನಚಿತ್ರ ಪ್ರಶಸ್ತಿ ಪಡೆದಿದೆ. ಜಂಟಲ್ ಮನ್ ಚಿತ್ರದ ನಟನೆಗಾಗಿ ಪ್ರಜ್ವಲ್ ದೇವರಾಜ್ ಅವರು ಅತ್ಯುತ್ತಮ ನಟ ಹಾಗೂ ಪಿಂಕಿ ಎಲ್ಲಿ ಚಿತ್ರದ ನಟನೆಗಾಗಿ ಅಕ್ಷತಾ ಪಾಂಡವಪುರ ಅವರು ಅತ್ಯುತ್ತಮ ನಟಿ ಪ್ರಶಸ್ತಿ ಪಡೆದಿದ್ದಾರೆ. ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಅಭಿನಂದನೆ ಸಲ್ಲಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕನ್ನಡದಲ್ಲಿ ಮತ್ತಷ್ಟು ಸದಭಿರುಚಿಯ ಚಿತ್ರಗಳು ಮೂಡಿ ಬರಲು, ಈ ಪ್ರಶಸ್ತಿಗಳು ಪ್ರೇರಣೆಯಾಗಲಿ ಎಂದು ಹಾರೈಸಿದ್ದಾರೆ.

<><><>

ಭದ್ರಾ ಮೇಲ್ದಂಡೆ ಯೋಜನೆಯ, ಚಿತ್ರದುರ್ಗ ಶಾಖಾ ಕಾಲುವೆ ಹಾಗೂ ತುಮಕೂರು ಶಾಖಾ ಕಾಲುವೆಗಳ ಭೂ ಸ್ವಾಧೀನ ಸಮಸ್ಯೆ ನಿವಾರಿಸುವ ನಿಟ್ಟಿನಲ್ಲಿ ಬೆಂಗಳೂರಿನಲ್ಲಿ, ರೈತರೊಂದಿಗೆ ಚರ್ಚಿಸಿರುವ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಅವರು, ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿ, ರೈತರಿಗಾಗಿರುವ ಭೂ ಸ್ವಾಧೀನ ಪರಿಹಾರ ತಾರತಮ್ಯವನ್ನು ಕಾನೂನು ಪ್ರಕಾರ ಸರಿಪಡಿಸಲಾಗುವುದು, ಮುಂದಿನ ಆರು ತಿಂಗಳ ಒಳಗಾಗಿ ಕಾಮಗಾರಿ ಪೂರ್ಣಗೊಳಿಸಿ ನೀರು ಹರಿಸಲಾಗುವುದು ಎಂದಿದ್ದಾರೆ.

<><><>

ರಾಜ್ಯದಲ್ಲಿ ಪರಿಶಿಷ್ಟ ಸಮುದಾಯದ ಅಭಿವೃದ್ಧಿಗೆ ಮೀಸಲಿಟ್ಟ ಅನುದಾನವನ್ನು ಅನ್ಯ ಯೋಜನೆಗಳಿಗೆ ಬಳಸಿಕೊಂಡಿಲ್ಲ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶಿವರಾಜ ತಂಗಡಗಿ ಹೇಳಿದ್ದಾರೆ. ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಮಾತನಾಡಿದ ಅವರು, ಸಮುದಾಯದ ಅಭಿವೃದ್ಧಿಗೆ ಮೀಸಲಿಟ್ಟ ಹಣವನ್ನು ಸಮುದಾಯಕ್ಕೆ ಬಳಕೆ ಮಾಡಲಾಗುತ್ತಿದೆ ಎಂದು ಹೇಳಿದರು. ರಾಜ್ಯದ ವಿವಿಧ ಭಾಗಗಳಲ್ಲಿ ಸರ್ಕಾರಿ ಸ್ಮಶಾನಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಾರ್ಮಿಕರನ್ನು ಕಾಯಂಗೊಳಿಸುವ ಕುರಿತು ಮುಂದಿನ ದಿನಗಳಲ್ಲಿ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು ಎಂದು ಪೌರಾಡಳಿತ ಖಾತೆ ಸಚಿವ ರಹೀಂ ಖಾನ್ ತಿಳಿಸಿದ್ದಾರೆ.

<><><>

ಬಾಗಲಕೋಟೆಯಲ್ಲಿ ಜವಳಿ ಪಾರ್ಕ್ ನಿರ್ಮಾಣಕ್ಕೆ ಸರ್ಕಾರ ಬದ್ಧವಾಗಿದೆ ಎಂದು, ಜವಳಿ ಖಾತೆ ಸಚಿವ ಶಿವಾನಂದ ಪಾಟೀಲ ಹೇಳಿದ್ದಾರೆ. ಕೇಶವಪ್ರಸಾದ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಸರ್ಕಾರ ಈಗಾಗಲೇ ಪಾರ್ಕ್ ನಿರ್ಮಾಣ ಮಾಡುವುದಾಗಿ ಘೋಷಿಸಿದೆ. ಈ ನಿಟ್ಟಿನಲ್ಲಿ ಕೆಲಸ ನಡೆಯುತ್ತಿದೆ ಎಂದು ತಿಳಿಸಿದರು.

<><><>

ತುಮಕೂರು ಜಿಲ್ಲೆ ಗುಬ್ಬಿ ಪಟ್ಟಣದ ಬೆಂಚಗೆರೆ ರೇಲ್ವೇ ಗೇಟ್ ನಲ್ಲಿ ವಾಹನ ಸಂಚಾರ ದಟ್ಟಣೆ ಸಮಸ್ಯೆ ಎದುರಾದ ಹಿನ್ನೆಲೆಯಲ್ಲಿ, ಸಾರ್ವಜನಿಕರ ಅನುಕೂಲಕ್ಕಾಗಿ 1 ಎಕರೆ 6 ಸೆಂಟ್ಸ್ ಸ್ಥಳವನ್ನು ಪಡೆದು, ಸೂಕ್ತ ರೇಲ್ವೇ ಮೇಲ್ಸೇತುವೆಯನ್ನು ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ ಎಂದು ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ತಿಳಿಸಿದ್ದಾರೆ.

<><><>

ಇಂದು ಜಗದ್ಗುರು ಶ್ರೀ ರೇಣುಕಾಚಾರ್ಯ ಜಯಂತಿ, ಈ ದಿನದಂದು ಗಣ್ಯರು ನಾಡಿನ ಜನತೆಗೆ ಶುಭಾಶಯ ಕೋರಿದ್ದಾರೆ. ಧಾರವಾಡದ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಜಯಂತಿ ನಿಮಿತ್ತ ವಿವಿಧ ಕಾರ್ಯಕ್ರಮಗಳು ಆಯೋಜಿತವಾಗಿದೆ.

<><><>

ಬಳ್ಳಾರಿ ನಗರದ ಆರಾಧ್ಯ ದೇವತೆ, ಕನಕ ದುರ್ಗಮ್ಮ ದೇವಿ ದೇವಸ್ಥಾನದ ವಾರ್ಷಿಕ ಸಿಡಿಬಂಡಿ ರಥೋತ್ಸವವು ಶ್ರದ್ಧಾಭಕ್ತಿಯಿಂದ ಜರುಗಿತು. ಸಾವಿರಾರು ಭಕ್ತರು ದೇವಿಯ ದರ್ಶನ ಪಡೆದರು. ವಿವಿಧ ಸಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..